KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-111
ಶುಕ್ರವಾರ 28 ಫೆಬ್ರವರಿ 2025
Price: 2.00 Rs. Pages-2

RNI: KARKAN/2023/88508

ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508

ಕೋರದಲ್ಲಿಂದು ತುಮಕೂರು ತಾಲ್ಲೂಕು ಸಾಹಿತ್ಯ ಸಮ್ಮೇಳನ

ತುಮಕೂರು: ತಾಲ್ಲೂಕು 7ನೇ ಕನ್ನಡ ಸಾಹಿತ್ಯ ಸಮ್ಮೇಳನ ಫೆ. 28ರಂದು ತಾಲ್ಲೂಕಿನ ಕೋರಾ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ನಡೆಯಲಿದೆ. ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಹಾಗೂ ತಾಲ್ಲೂಕು ಘಟಕದ ವತಿಯಿಂದ ಸಮ್ಮೇಳನ ಹಮ್ಮಿಕೊಂಡಿದ್ದು, ಶುಕ್ರವಾರ ಬೆಳಿಗ್ಗೆ 7.30 ಗಂಟೆಗೆ ಧ್ವಜಾರೋಹಣ, 8.30ಕ್ಕೆ ಸಮ್ಮೇಳನಾಧ್ಯಕ್ಷರ ಮೆರವಣಿಗೆ, 10 ಗಂಟೆಗೆ ವೇದಿಕೆ ಕಾರ್ಯಕ್ರಮ ಆರಂಭವಾಗಲಿದೆ. ಸಮ್ಮೇಳನಾಧ್ಯಕ್ಷ ಎಂ.ನಂಜಯ್ಯ ಅವರ ಸಾಹಿತ್ಯಾವಲೋಕನ; ಕೋರಾ– ಸ್ಥಳೀಯ ಸಾಂಸ್ಕೃತಿಕತೆ; ಶೈಕ್ಷಣಿಕ ನಗರಿಯಿಂದ– ಕೈಗಾರಿಕಾ ನಗರಿಯತ್ತ ತುಮಕೂರು; ಜಾನಪದ ಕಲೆ ಮತ್ತು ಸಾಹಿತ್ಯದ ಮೇಲೆ ನಗರೀಕರಣದ ಪ್ರಭಾವ; ರಂಗಭೂಮಿ ಮತ್ತು ಸಂಗೀತ; ಕವಿ ಗೋಷ್ಠಿಗಳು ನಡೆಯಲಿವೆ ಎಂದು ಪರಿಷತ್ತಿನ ತಾಲ್ಲೂಕು ಘಟಕದ ಅಧ್ಯಕ್ಷ ಚಿಕ್ಕಬೆಳ್ಳಾವಿ ಶಿವಕುಮಾರ್ ತಿಳಿಸಿದ್ದಾರೆ.

ಸಹಸ್ರಾರು ಭಕ್ತರ ಸಮ್ಮುಖದಲ್ಲಿ ವೈಭವದಿಂದ ಸಿದ್ಧಗಂಗೆಯ

ಶ್ರೀ ಸಿದ್ಧಲಿಂಗೇಶ್ವರ ಸ್ವಾಮಿಯ ಮಹಾರಥೋತ್ಸವ

ತುಮಕೂರು: ಐತಿಹಾಸಿಕ ಪ್ರಸಿದ್ಧ ಸಿದ್ಧಗಂಗೆಯಲ್ಲಿ ಶ್ರೀ ಸಿದ್ಧಲಿಂಗೇಶ್ವರ ಸ್ವಾಮಿಯ ಮಹಾರಥೋತ್ಸವ ವಿವಿಧ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ವಿಜೃಂಭಣೆಯಿಂದ ನಡೆಯಿತು.

ಶ್ರೀಕ್ಷೇತ್ರ ಸಿದ್ದಗಂಗೆಯ ಆರಾಧ್ಯದೈವ ಶ್ರೀ ಸಿದ್ದಲಿಂಗೇಶ್ವರ ಸ್ವಾಮಿಯ ರಥೋತ್ಸವಕ್ಕೆ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ ಅವರು ಬೆಳಿಗ್ಗೆ 11.55ಕ್ಕೆ ಸರಿಯಾಗಿ ಶುಭ ಲಗ್ನದಲ್ಲಿ ರಥದ ಗಾಲಿಗೆ ತೆಂಗಿನಕಾಯಿ ಒಡೆದು ಹಾಗೂ ಶ್ರೀಸ್ವಾಮಿಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ವಿದ್ಯುಕ್ತ ಚಾಲನೆ ನೀಡಿದರು.

ರಥೋತ್ಸವದಲ್ಲಿ ಶ್ರೀಕ್ಷೇತ್ರದ ಕಿರಿಯ ಶ್ರೀಗಳಾದ ಶ್ರೀ ಶಿವಸಿದ್ದೇಶ್ವರ ಸ್ವಾಮೀಜಿ, ಶಾಸಕ ಜ್ಯೋತಿಗಣೇಶ್, ಜಿಲ್ಲಾಧಿಕಾರಿ ಶುಭಕಲ್ಯಾಣ್, ಜಿ.ಪಂ. ಸಿಇಓ ಜಿ. ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ., ಮಹಾನಗರ ಪಾಲಿಕೆ ಆಯುಕ್ತೆ ಬಿ.ವಿ. ಅಶ್ವಿಜಾ, ವಿವಿಧ ಮಠಾಧೀಶರುಗಳು ಸೇರಿದಂತೆ ಅನೇಕ ಗಣ್ಯರು, ಭಕ್ತಾದಿಗಳು ಪಾಲ್ಗೊಂಡು ರಥವನ್ನು ಮುಂದಕ್ಕೆ ಎಳೆದು ಭಕ್ತಿ ಸಮರ್ಪಿಸಿದರು.

ಇದಕ್ಕೂ ಮುನ್ನ ರಥಕ್ಕೆ ಗಣಪತಿ ಪೂಜೆ, ಸ್ವಸ್ತಿ ಪುಣ್ಯಾಃ, ಕಳಸಗಳ ಆರಾಧನೆ, ರಥಾಂಗ ಪೂಜೆ ಸೇರಿದಂತೆ ವಿವಿಧ ಪೂಜೆ ಸಲ್ಲಿಸಿ ಶ್ರೀಕ್ಷೇತ್ರದ ಆರಾಧ್ಯ ದೈವ ಸಿದ್ದಲಿಂಗೇಶ್ವರಸ್ವಾಮಿಯನ್ನು ರಥಕ್ಕೆ ಕೂರಿಸಿ ರಾಜೋಪಚಾರ ಮತ್ತು ಅಷ್ಟೋತ್ತರ ಪೂಜೆ ನೆರವೇರಿಸಲಾಯಿತು. ರಥದ ಮುಂಭಾಗದಲ್ಲಿ ಜಯಾದಿ ಹೋಮ, ಗಣ ಹೋಮ, ಮೃತ್ಯುಂಜಯ ಹೋಮ ಸಹ ಮಾಡಲಾಯಿತು.

ರಥವನ್ನು ಅಭೂತಪೂರ್ಣ ವಸ್ತ್ರಗಳಿಂದ ಸುವರ್ಣ ಕಲಶಗಳಿಂದ ಧಾರ್ಮಿಕ ಲಾಂಛನಗಳಾದ ಮಕರ, ತೋರಣ, ಕಲಶ, ಕನ್ನಡಿ ವಿವಿಧ ಬಗೆಯ ಪುಷ್ಪ ಮಾಲೆಗಳಿಂದ ಅಲಂಕರಿಸಲಾಗಿತ್ತು.

ರಥ ಸಾಗಿದ ದಾರಿಯುದ್ದಕ್ಕೂ ನಂದಿಧ್ವಜ, ಕರಡಿ ಮಜಲು, ನಾಗಸ್ವರ, ವೀರಗಾಸೆ, ಪಟಕುಣಿತ, ಡೋಲು ಕುಣಿತ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳ ಪ್ರದರ್ಶನ ನೆರೆದಿದ್ದ ಭಕ್ತ ಸಮೂಹವನ್ನು ಆಕರ್ಷಿಸಿದವು.

ನಾಡಿನ ವಿವಿಧೆಡೆಯಿಂದ ಆಗಮಿಸಿದ್ದ ಸಾವಿರಾರು ಭಕ್ತರು ಸುಡು ಬಿಸಿಲನ್ನೂ ಲೆಕ್ಕಿಸದೆ ರಥೋತ್ಸವದಲ್ಲಿ ಭಾಗವಹಿಸಿ ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಮಾಡಿಕೊಂಡಿದ್ದ ಹರಕೆ ತೀರಿಸಲು ರಥಕ್ಕೆ ಬಾಳೆಹಣ್ಣು, ಹೂವು, ದವನ ಎಸೆದು ಭಕ್ತಿ ಸಮರ್ಪಿಸಿದರು.

ಶಿವರಾತ್ರಿ ಪ್ರಯುಕ್ತ ಜಾಗರಣೆಗಾಗಿ ನಾಡಿನಾದ್ಯಂತ ಸಹಸ್ರಾರು ಭಕ್ತಾದಿಗಳು ರಾತ್ರಿಯೇ ಶ್ರೀಮಠಕ್ಕೆ ಆಗಮಿಸಿದ್ದು ಇಂದು ನಡೆದ ರಥೋತ್ಸವದಲ್ಲಿ ಪಾಲ್ಗೊಂಡು ಪುನೀತರಾದರು.

ಶ್ರೀಕ್ಷೇತ್ರದಲ್ಲಿಂದು ಸುಡುವ ಬಿಸಿಲನ್ನೂ ಲೆಕ್ಕಿಸದೆ ಭಕ್ತಾದಿಗಳು ಶ್ರೀಮಠದ ಶಾಲಾ ಕಟ್ಟಡಗಳ ಮೇಲೆ ಹತ್ತಿ ರಥೋತ್ಸವವನ್ನು ವೀಕ್ಷಿಸುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು.

ರಥೋತ್ಸವದ ಪ್ರಯುಕ್ತ ಭಕ್ತಾದಿಗಳಿಗೆ ಹಲವು ಸಂಘ ಸಂಸ್ಥೆಗಳಿಂದ ಪಾನಕ, ಮಜ್ಜಿಗೆಯನ್ನು ವಿತರಿಸಲಾಯಿತು.

ರಥೋತ್ಸವದಲ್ಲಿ ನಾಡಿನ ವಿವಿಧೆಡೆಯಿಂದ ಪಾಲ್ಗೊಂಡಿದ್ದ ಸಹಸ್ರಾರು ಮಂದಿ ಭಕ್ತಾದಿಗಳಿಗೆ ವಿಶೇಷ ಪ್ರಸಾದ, ದಾಸೋಹ ವ್ಯವಸ್ಥೆ ಮಾಡಲಾಗಿತ್ತು.

ಬಸ್ ಸಿಬ್ಬಂದಿ ಮೇಲಿನ ಹಲ್ಲೆ ಖಂಡಿಸಿ ಹೋರಾಟ

ಸಾರಿಗೆ ಸಂಸ್ಥೆ ನಿವೃತ್ತ ನೌಕರರಿಂದ ಇಂದು ಪ್ರತಿಭಟನೆ

ತುಮಕೂರು: ಬೆಳಗಾವಿಯ ಬಾಳೆಕುಂದ್ರಿಯಲ್ಲಿ ಕೆಎಸ್‌ಆರ್‌ಟಿಸಿಯ ಚಾಲಕ, ನಿರ್ವಾಹಕರ ಮೇಲೆ ಪುಂಡರು ನಡೆಸಿದ ಹಲ್ಲೆ ಖಂಡಿಸಿ, ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ರಾಜ್ಯ ರಸ್ತೆ ಸಾರಿಗೆ ನಿಗಮದ ತುಮಕೂರು ವಿಭಾಗದ ನಿವೃತ್ತ ನೌಕರರು ಶುಕ್ರವಾರ (ಫೆ.28) ನಗರದಲ್ಲಿ ಪ್ರತಿಭಟನೆ ನಡೆಸಲಿದ್ದಾರೆ. ಈ ಹೋರಾಟವನ್ನು ವಿವಿಧ ಸಂಘಟನೆಗಳ ಮುಖಂಡರು ಬೆಂಬಲಿಸುವುದಾಗಿ ತಿಳಿಸಿದ್ದಾರೆ.

ಬೆಳಗಾವಿ ಸುಳೆಭಾವಿ ಮಾರ್ಗದಲ್ಲಿ ಕಾರ್ಯಾಚರಣೆಯಲ್ಲಿದ್ದ ಸಂದರ್ಭದಲ್ಲಿ ಬಾಳೆಕುಂದ್ರಿ ಬಸ್ ನಿಲ್ದಾಣದ ಬಳಿ ಬಸ್ ನಿರ್ವಾಹಕ ಮಹಾದೇವಪ್ಪ ಮಲ್ಲಪ್ಪ ಹುಕ್ಕೇರಿ ಅವರ ಮೇಲೆ ಕೆಲವರು ಮರಾಠಿ ಭಾಷೆಯಲ್ಲಿ ಮಾತನಾಡು ಎಂದು ಒತ್ತಾಯಿಸಿ ಹಲ್ಲೆ ಮಾಡಿರುವುದು ಖಂಡನೀಯ ಎಂದು ಸಾರಿಗೆ ನಿಗಮದ ನಿವೃತ್ತ ನೌಕರರ ಟ್ರಸ್ಟ್ ಪದಾಧಿಕಾರಿಗಳು ಹೇಳಿದ್ದಾರೆ.

ಕರ್ನಾಟಕದಲ್ಲಿ ಕನ್ನಡವೇ ಅಧಿಕೃತ ಭಾಷೆಯಾಗಿದ್ದು, ಕನ್ನಡದಲ್ಲಿ ವ್ಯವಹರಿಸುವುದು ಕರ್ತವ್ಯ. ಹೀಗಿದ್ದೂ ಸಂಸ್ಥೆ ಸಿಬಂದಿ ಮೇಲೆ ಹಲ್ಲೆ ಮಾಡಿರುವುದು ಖಂಡನೀಯ. ಪ್ರಕರಣ ಖಂಡಿಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿ ಸಾರಿಗೆ ಸಂಸ್ಥೆ ನಿವೃತ್ತ ನೌಕರರು ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪಾದಯಾತ್ರೆ ತೆರಳಿ ಪ್ರತಿಭಟನೆ ನಡೆಸಲಾಗುವುದು ಎಂದು ಹೇಳಿದ್ದಾರೆ.

ನಿವೃತ್ತ ಸಾರಿಗೆ ನೌಕರರ ಹೋರಾಟಕ್ಕೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಬೆಂಬಲ ನೀಡುತ್ತದೆ ಎಂದು ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಸ್.ಸಿದ್ಧಲಿಂಗಪ್ಪ ಹೇಳಿದ್ದಾರೆ. ಕನ್ನಡಪರ ಸಂಘಟನೆಗಳು, ದಲಿತ ಸಂಘರ್ಷ ಸಮಿತಿ, ರೈತ ಸಂಘಟನೆ, ಬೀದಿಬದಿ ವ್ಯಾಪಾರಿಗಳು ಪ್ರತಿಭಟನೆ ಬೆಂಬಲಿಸಿ ಹೋರಾಟದಲ್ಲಿ ಭಾಗವಹಿಸುವರು ಎಂದು ಜಿಲ್ಲಾ ಕನ್ನಡ ಸೇನೆ ಅಧ್ಯಕ್ಷ ಧನಿಯಾಕುಮಾರ್ ತಿಳಿಸಿದ್ದಾರೆ.

ನಾಯಿಗಳ ಹಿಂಡು ದಾಳಿ; 40 ಕುರಿಗಳು ಸಾವು!

ಕೊಡಿಗೇನಹಳ್ಳಿ ಗ್ರಾಮದ ಕುರಿ ರೊಪ್ಪಕ್ಕೆ ನುಗ್ಗಿದ್ದ ಬೀದಿನಾಯಿಗಳ ಗುಂಪೊಂದು ಏಕಾಏಕಿ ಕುರಿದೊಡ್ಡಿಗೆ ನುಗ್ಗಿ ಸುಮಾರು 40 ಕುರಿಗಳನ್ನು ಸಾಯಿಸಿರುವ ಘಟನೆ ವರದಿಯಾಗಿದೆ.

ಕೊಡಿಗೇನಹಳ್ಳಿ ಹೋಬಳಿಯ ದೊಡ್ಡಮಾಲೂರು ಗ್ರಾಪಂನ ಬೂದೇನಹಳ್ಳಿ ನಾಗಮ್ಮ ಎಂಬ ಮಹಿಳೆಯ ಕುರಿ ದೊಡ್ಡಿಯಲ್ಲಿ ಘಟನೆ ಜರುಗಿದ್ದು ಸುಮಾರು 3 ಲಕ್ಷ ರೂ. ನಷ್ಟವಾಗಿದೆ ಎಂದು ಅಂದಾಜಿಸಲಾಗಿದೆ. 8 ಕುರಿಗಳಿಗೆ ಪಶು ವೈದ್ಯರು ಚಿಕಿತ್ಸೆ ನೀಡಿದ್ದು, ಈ ಕುರಿಗಳು ಬದುಕುಳಿಯುವುದು ಕಷ್ಟ ಎಂದಿದ್ದಾರೆ ಎನ್ನಲಾಗಿದೆ.

ಬೀದಿನಾಯಿಗಳ ಹಾವಳಿಯಿಂದ ಈ ಘಟನೆ ಜರುಗಿದ್ದು ಇನ್ನಾದರೂ ಗ್ರಾಪಂ ಅಕಾರಿಗಳು ಎಚ್ಚೆತ್ತುಕೊಂಡು ಬೀದಿ ನಾಯಿಗಳನ್ನು ನಿಯಂತ್ರಿಸಬೇಕು ಇಲ್ಲದಿದ್ದರೆ ಇನ್ನಷ್ಟು ಕುರಿಗಳ ಮೇಲೆ ಹಾಗೂ ಪುಟ್ಟ ಮಕ್ಕಳ ಮೇಲೆ ಬೀದಿ ನಾಯಿಗಳ ಎರಗುವ ಆತಂಕ ಇದೆ ಎಂದು ಆರೋಪಿಸಿದ್ದಾರೆ. ಸ್ಥಳಕ್ಕೆ ಗ್ರಾಪಂ ಕಾರ್ಯದರ್ಶಿ ಉಷಾ, ಪಿಸೈ ಶ್ರೀನಿವಾಸ್ ಪ್ರಸಾದ್ ಭೇಟಿ ನೀಡಿದ್ದರು.

ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಹುಟುಹಬ್ಬ ಆಚರಣೆ ಸಂದರ್ಭದಲ್ಲಿ ಶಾಸಕ ಜ್ಯೋತಿಗಣೇಶ್

ರಾಜ್ಯದಲ್ಲಿ ಬಿಜೆಪಿಯನ್ನು ಹಂತ ಹಂತವಾಗಿ ಅಧಿಕಾರಕ್ಕೆ ತಂದಿದ್ದು ಬಿಎಸ್‌ವೈ

ತುಮಕೂರು:ಕರ್ನಾಟಕ ರಾಜ್ಯ ಹಿರಿಯ ಬಿಜೆಪಿ ಕಾರ್ಯಕರ್ತರ ವೇದಿಕೆ ಹಾಗು ಬಿ.ಎಸ್.ಯಡಿಯೂರಪ್ಪ ಅಭಿಮಾನಿ ಬಳಗದ ವತಿಯಿಂದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ 83ನೇ ಹುಟ್ಟು ಹಬ್ಬವನ್ನು ಎಸ್.ಎಸ್.ಪುರಂನ ಉಮಾಮಹಾಗಣಪತಿ ದೇವಾಲಯದ ಬಳಿ ಅನಾಥ ಮಕ್ಕಳಿಗೆ ಉಪಹಾರ ನೀಡುವ ಮೂಲಕ ಆಚರಿಸಲಾಯಿತು. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ 83ನೇ ಹುಟ್ಟು ಹಬ್ಬಕ್ಕೆ ಚಾಲನೆ ನೀಡಿ ಮಾತನಾಡಿದ ತುಮಕೂರು ನಗರ ಶಾಸಕ ಜಿ.ಬಿ.ಜೋತಿಗಣೇಶ್, ಬಿ.ಎಸ್.ಯಡಿಯೂರಪ್ಪ ಓರ್ವ ಹುಟ್ಟು ಹೋರಾಟಗಾರರು,ಸೈಕಲ್‌ಮೇಲೆ ಶಿಕಾರಿಪುರದಿಂದ ವಿಧಾನಸೌಧದವರೆಗೆ ಯಾತ್ರೆ ಕೈಗೊಂಡು, ಬಿಜೆಪಿ ಪಕ್ಷವನ್ನು ಹಂತ ಹಂತವಾಗಿ ಅಧಿಕಾರಕ್ಕೆ ತಂದವರು.

ಹಿಡಿದ ಕೆಲಸವನ್ನು ಎಂದಿಗೂ ಕೈಬಿಡದೆ ನಡೆಸುತ್ತಿದ್ದ ಅವರ ಜೀವನ ಇತರೆ ರಾಜಕಾರಣಿಗಳಿಗೆ ಮಾದರಿ.83ನೇ ವಯಸ್ಸಿನಲ್ಲಿಯೂ ಪಕ್ಷವನ್ನು ಮುನ್ನೆಡೆಸುವ ಪ್ರಾಮಾಣಿಕ ಕೆಲಸ ಮಾಡುತ್ತಿದ್ದಾರೆ. ಅವರಿಗೆ ಭಗವಂತ ಆರೋಗ್ಯ ಕೊಟ್ಟು ಕಾಪಾಡಲಿ ಎಂದು ಶುಭ ಹಾರೈಸಿದರು.

ಹಿರಿಯ ಬಿಜೆಪಿ ಕಾರ್ಯಕರ್ತರ ವೇದಿಕೆ ಸಂಚಾಲಕ ಸದಾಶಿವಯ್ಯ ಮಾತನಾಡಿ, ಕರ್ನಾಟಕ ರಾಜ್ಯದ ಅಭಿವೃದ್ಧಿಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಕೊಡುಗೆ ಅಪಾರವಾಗಿದೆ.1972 ಶಿಕಾರಿಪುರದಲ್ಲಿ ಜನಸಂಘದ ಜಿಲ್ಲಾಧ್ಯಕ್ಷರಾಗಿ ಸಾರ್ವಜನಿಕ ಸೇವೆಗೆ ದುಮುಕಿದ ಅವರು,ಬಗರ್ ಹುಕ್ಕಂ ಸಾಗುವಳಿದಾರರ ವೇದಿಕೆ ಅಧ್ಯಕ್ಷರಾಗಿ ಹಲವಾರು ಹೋರಾಟಗಳನ್ನು ನಡೆಸಿ, ಜನಾನುರಾಗಿಗಳಾದರೆ, ಹತ್ತಾರು ವರ್ಷಗಳಿಂದಲೂ ದಕ್ಷಿಣ ಭಾರತದಲ್ಲಿ ರಾಜಕೀಯ ಅಸ್ಥಿತ್ವ ಕಂಡುಕೊಳ್ಳಲು ಬಿಜೆಪಿ ಕನಸನ್ನು 2008ರಲ್ಲಿ ಮುಖ್ಯಮಂತ್ರಿಯಾಗುವ ಮೂಲಕ ನನಸು ಮಾಡಿದ ಕೀರ್ತಿ ಬಿ.ಎಸ್.ಯಡಿಯೂರಪ್ಪ ನವರಿಗೆ ಸಲ್ಲುತ್ತದೆ. ಒಂದು ಕಾಲದಲ್ಲಿ ಬಿ.ಎಸ್.ಯಡಿಯೂರಪ್ಪ ಗುಡುಗಿದರೆ ವಿಧಾನಸೌಧ ನಡುಗುತ್ತದೆ ಎಂಬ ಮಾತುಗಳು ಕೇಳಿ ಬರುತಿದ್ದವು.ತಮ್ಮನ್ನು ನಂಬಿ ಬಂದವರನ್ನು ಕೈಬಿಡದೆ ರಾಜಕೀಯವಾಗಿ ದಡ ಸೇರಿಸಿದ ವ್ಯಕ್ತಿ ಎಂದರೆ ಬಿ.ಎಸ್.ಯಡಿಯೂರಪ್ಪ ಮಾತ್ರ. ಅವರಿಗೆ ದೇವರು ಒಳ್ಳೆಯ ಆರೋಗ್ಯ ನೀಡಿ, ಮತ್ತಷ್ಟು ಮಾರ್ಗದರ್ಶನ ಮಾಡುವ ಹುಮ್ಮಸ್ಸು ನೀಡಲಿ ಎಂದು ಶುಭ ಹಾರೈಸಿದರು.

ಇದೇ ವೇಳೆ ಕರ್ನಾಟಕ ರಾಜ್ಯ ಹಿರಿಯ ಬಿಜೆಪಿ ಕಾರ್ಯಕರ್ತರ ವೇದಿಕೆ ಹಾಗೂ ಬಿ.ಎಸ್.ವೈ ಅಭಿಮಾನಿ ಬಳಗದಿಂದ ಬಿ.ಎಸ್.ವೈ ಹೆಸರಿನಲ್ಲಿ ವಿಶೇಷ ಪೂಜೆ ಸಲ್ಲಿಸಿ, 100ಕ್ಕೂ ಹೆಚ್ಚು ಅನಾಥ ಮಕ್ಕಳಿಗೆ ಉಪಹಾರ ವಿತರಿಸಲಾಯಿತು. ಹಿರಿಯ ಬಿಜೆಪಿ ಮುಖಂಡರಾದ ಆರ್.ಜಿ.ಸುರೇಶ್,ಷಣ್ಮುಖ, ಷಡಕ್ಷರಿ, ಜಗದೀಶ್, ಲೋಕೇಶ್, ಚಂದ್ರು, ರವಿ, ವಿನಯಜೈನ್, ನಂಜುಂಡಸ್ವಾಮಿ, ಚಂದ್ರಣ್ಣ ಮತ್ತಿತರರು ಪಾಲ್ಗೊಂಡಿದ್ದರು.

ಕೃಷಿ ಬಳಕೆ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ವಿಳಂಬ ಬೇಡ

ತುಮಕೂರು: ರೈತರು ಕೃಷಿ ಬಳಕೆಗಾಗಿ ಕೊರೆಸಿರುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ವಿಳಂಬ ಮಾಡಬಾರದೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಅಂತರ್ಜಲ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಬೇಸಿಗೆ ಕಾಲವಾಗಿರುವ ಹಿನ್ನೆಲೆಯಲ್ಲಿ ರೈತರ ಬೆಳೆಗಳಿಗೆ ನೀರಿನ ಅಭಾವದ ಕಾರಣ ತುರ್ತಾಗಿ ವಿದ್ಯುಚ್ಛಕ್ತಿಯನ್ನು ಪಡೆಯಲು ಅನುಕೂಲವಾಗುವ ದೃಷ್ಟಿಯಿಂದ, ನೋಂದಣಿ ಪ್ರಮಾಣ ಪತ್ರವನ್ನು ನೀಡುವ ವಿಧಾನವನ್ನು ಸರಳೀಕರಿಸಬೇಕು. ಜಿಲ್ಲಾ ಅಂತರ್ಜಲ ಕಚೇರಿಯಲ್ಲಿ ಅರ್ಜಿ ಶುಲ್ಕ ಮತ್ತು ದಂಡ ಪಾವತಿಸಿ ಸ್ವೀಕೃತಿ ಪತ್ರ ಪಡೆದು ಬೆಸ್ಕಾಂ ಕಚೇರಿಗೆ ಸಲ್ಲಿಸಿ ವಿದ್ಯುಚ್ಛಕ್ತಿ ಪಡೆಯಲು ಹಾಗೂ ತದನಂತರ ನೋಂದಣಿ ಪ್ರಮಾಣ ಪತ್ರ ಪಡೆದುಕೊಳ್ಳಲು ರೈತರಿಗೆ ಅನುವು ಮಾಡಿಕೊಡಬೇಕು ಎಂದು ತಾಕೀತು ಮಾಡಿದರು.

ಜಿಲ್ಲೆಯಲ್ಲಿ ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆ ವಿನಿಯಮನ) ಅಧಿನಿಯಮ–2012 ಮತ್ತು ನಿಯಮಾವಳಿ–2012ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ಅಂತರ್ಜಲ ಅತಿಬಳಕೆ ತಾಲ್ಲೂಕುಗಳೆಂದು ಅಧಿಸೂಚಿಸಲಾಗಿರುವ ಜಿಲ್ಲೆಯ ಚಿಕ್ಕನಾಯಕನಹಳ್ಳಿ, ತಿಪಟೂರು, ಕೊರಟಗೆರೆ, ಮಧುಗಿರಿ ಹಾಗೂ ತುಮಕೂರು ಸೇರಿದಂತೆ 5 ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಪ್ರತಿಯೊಬ್ಬ ಅಂತರ್ಜಲ ಬಳಕೆದಾರನೂ ಯಾವುದೇ ಉಪಯೋಗಕ್ಕಾಗಿ ಕೊಳವೆ ಬಾವಿಯನ್ನು ಕೊರೆಸಲು ಹಾಗೂ ಅಂತರ್ಜಲವನ್ನು ಬಳಸಲು ಜಿಲ್ಲಾ ಅಂತರ್ಜಲ ಸಮಿತಿಯಿಂದ ಅನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿದರು.

ಅಂತರ್ಜಲ ಅತಿಬಳಕೆ ತಾಲ್ಲೂಕುಗಳೆಂದು ಅಧಿಸೂಚಿಸಲಾಗಿರುವ ಜಿಲ್ಲೆಯ 5 ತಾಲ್ಲೂಕುಗಳಲ್ಲಿ ಪ್ರಸ್ತುತ ಇರುವ ಕೊಳವೆ ಬಾವಿಯನ್ನು ಸಕ್ಷಮ ಪ್ರಾಧಿಕಾರದಲ್ಲಿ ನೋಂದಾಯಿಸಿಕೊಳ್ಳಬೇಕೆಂದು ಸಾರ್ವಜನಿಕರ ಗಮನಕ್ಕೆ ತರಬೇಕು ಎಂದು ನಿರ್ದೇಶಿಸಿದರು.

ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೆ ಅನಧಿಕೃತವಾಗಿ ಕೊಳವೆ ಬಾವಿಯನ್ನು ಕೊರೆಸಿದಲ್ಲಿ ಭೂಮಾಲೀಕರು ಮತ್ತು ರಿಗ್ ಮಾಲೀಕರ ಮೇಲೆ ಕಾನೂನು ರೀತ್ಯ ಕ್ರಮಕೈಗೊಳ್ಳಲು ಅಧಿಕಾರಿಗಳು ಹಿಂಜರಿಯಬಾರದು ಎಂದು ಸೂಚಿಸಿದರು.

ಸಭೆಯಲ್ಲಿ ಹಿರಿಯ ಭೂವಿಜ್ಞಾನಿ ನಾಗವೇಣಿ, ತಿಪಟೂರು ವಿಭಾಗದ ಬೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ಸೋಮಶೇಖರ ಗೌಡ ಸೇರಿದಂತೆ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ದೇವರಾಯನದುರ್ಗ: ಮಾ.13ರಂದು ಬ್ರಹ್ಮರಥೋತ್ಸವ



ತುಮಕೂರು: ಇತಿಹಾಸ ಪ್ರಸಿದ್ಧ ದೇವರಾಯನ ದುರ್ಗ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ಬ್ರಹ್ಮರಥೋತ್ಸವವು ಮಾರ್ಚ್ 13ರಂದು ಸಾವಿರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆಯಲಿದೆ. ಕರಿಗಿರಿ ಕ್ಷೇತ್ರವೆಂದೇ ಪ್ರಸಿದ್ಧಿ ಪಡೆದಿರುವ ದೇವರಾಯನದುರ್ಗದ ಶ್ರೀ ಲಕ್ಷ್ಮೀನರಸಿಂಹ ಸ್

ಬಾವಿಯಲ್ಲಿ ಈಜಲು ಹೋಗಿ ಯುವಕ ಸಾವು

ಕುಣಿಗಲ್ : ಬೆಟ್ಟಹಳ್ಳಿ ಗ್ರಾಮದ ಬಳಿಯ ತೋಟದ ಬಾವಿಯಲ್ಲಿ ಈಜಲು ಹೋಗಿ ಕುಂದಾಪುರದ ಪೂರ್ಣೇಶ್ (26)ಎಂಬ ಯುವಕ ಮೃತಪಟ್ಟಿರುವ ಘಟನೆ ನಡೆದಿದೆ. ತಾಲೂಕಿನ ಹುತ್ರಿ ಹೋಬಳಿ ಬೆಟ್ಟಹಳ್ಳಿ ಗ್ರಾಮದ ಸ್ನೇಹಿತರ ಮನೆಗೆ ಬೆಂಗಳೂರಿನಲ್ಲಿ ಕೆಲಸ ಮಾಡು ತ್ತಿದ್ದ ಮತ್ತಿಬ್ಬರ ಸ್ನೇಹಿತರೊಂದಿಗೆ ಹಬ್ಬಕ್ಕೆ ಬಂದಿದ್ದು, ಮಧ್ಯಾಹ್ನ ಸ್ನೇಹಿತರು ತೋಟವೊಂದರ ಬಾವಿಯಲ್ಲಿ ಈಜಾ ಡಲು ಇಳಿದಿದ್ದು ಈಜು ಬಾರದ ಈತನು ಕೂಡ ನೀರಿಗೆ ದುಮುಕಿದ್ದಾನೆ ಎನ್ನಲಾ ಗಿದೆ. ಈತನ ತಾಯಿ, ತಂಗಿ ಕುಂದಾಪುರ ದ ಮಲ್ಲಳ್ಳಿಯಲ್ಲಿ ನೆಲೆಸಿದ್ದು ವಿಷಯ ತಿಳಿದು ತಂಗಿ, ಮಾವ ಕುಂದಾಪುರದಿಂದ ಬಂದು ಕುಣಿಗಲ್ ಪೊಲೀಸ್ ಠಾಣೆಗೆ ನೀಡಿದ ದೂರಿನ ಮೇರೆಗೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂರು ಮಂದಿ ಸ್ನೇಹಿತರನ್ನು ಪೊಲೀಸರು ಬಂಧಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ. ಈತ ಕುಂದಾಪುರದ ತಾಲೂಕಿನ ಮಲ್ಲಳ್ಳಿಯವನಾಗಿದ್ದು ಬೆಂಗಳೂರಿನಲ್ಲಿ ಪುಸ್ತಕಗಳ ಎಡಿಟಿಂಗ್, ಚಿತ್ರಗಳ ಪೈಂಟಿಂಗ್ ಕೆಲಸ ಮಾಡುತ್ತಿದ್ದು ಹಾಗು ಹೆಸರುಘಟ್ಟ ರಸ್ತೆಯಲ್ಲಿರುವ ಸಪ್ತಗಿರಿ ಇನ್ಸ್ಟಿಟ್ಯೂಷನ್ ನ್ನಲ್ಲಿಯೂ ಕೆಲಸ ಮಾಡುತ್ತಿದ್ದನೆಂದು ತಿಳಿದು ಬಂದಿದೆ.

ಪತಂಜಲಿ ಯೋಗ ಶಿಕ್ಷಣ ಸಮಿತಿಯಿಂದ

ಹನ್ನೊಂದು ಸುತ್ತಿನ ಶಿವನಮಸ್ಕಾರ

ಮಧುಗಿರಿ: ಪಟ್ಟಣದಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಪ್ರಸನ್ನ ಪಾರ್ವತಿ ಸಮೇತ ಮಲ್ಲೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಮಹಾಶಿವರಾತ್ರಿ ಹಬ್ಬದ ಅಂಗವಾಗಿ ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ಹೇಮಾವತಿ ವಲಯ ಮಧುಗಿರಿ ಶಾಖೆ ವತಿಯಿಂದ ಯೋಗ ಬಂಧುಗಳು ಪಾಲ್ಗೊಂಡು 11 ಅಗ್ನಿಹೋತ್ರಗಳನ್ನು ಹನ್ನೊಂದು ಸುತ್ತಿನ ಶಿವನಮಸ್ಕಾರವನ್ನು ಹಬ್ಬದ ಬೆಳಗಿನ ಜಾವ ಮಾಡಲಾಯಿತು.

ಇದಾದ ಬಳಿಕ ಯೋಗಾಸನದ ಉಸಿರಾಟ ಪ್ರಕ್ರಿಯೆ, ಗಣೇಶ ನಮಸ್ಕಾರ, ಸೂರ್ಯ ನಮಸ್ಕಾರ ಹಾಗೂ ಬ್ರಹ್ಮಕುಮಾರಿ ಸಮಾಜದ ವತಿಯಿಂದ ಶಿವರಾತ್ರಿ ಬಗ್ಗೆ ವಿಶೇಷ ಉಪನ್ಯಾಸ ನಡೆಸಲಾಯಿತು.

ಈ ವೇಳೆ ಮದುಗಿರಿ ಸಮಿತಿಯ ಸಂಚಾಲಕರಾದ ಎಂ ಎನ್ ನರಸಿಂಹಮೂರ್ತಿ, ಮುಖ್ಯ ಶಿಕ್ಷಕ ವಕೀಲ ಆನಂದ್, ಶಿಕ್ಷಕರುಗಳಾದ ವಿಜಯ ಶ್ರೀನಾಥ್, ಕೃಷ್ಣಕುಮಾರ್,ಚಂದ್ರೇಗೌಡ, ಅಶ್ವಿನಿ ಕಿರಣ್, ಲಕ್ಷ್ಮಿ ರಮೇಶ್, ಗೀತಾ ನಾಗರಾಜು, ಪ್ರಕಾಶ್, ತೋಟದಪ್ಪ, ಲಕ್ಷ್ಮಿಕಾಂತ್, ಸ್ವರ್ಣ ರಮೇಶ್ ಹಾಗೂ ಯೋಗ ಬಂಧುಗಳು ಪಾಲ್ಗೊಂಡಿದ್ದರು.

ನಾಳೆ ಗಾಂಧಿ ರೈತ ವಿಜ್ಞಾನ ಕೇಂದ್ರ ಜೈವಿಕ ಸಂಪನ್ಮೂಲ ಕೇಂದ್ರ ಉದ್ಘಾಟನೆ

ತುಮಕೂರು: ಜನರಿಗೆ ವಿಷಮುಕ್ತ ಆಹಾರ ದೊರಯಬೇಕು. ಭೂಮಿಯ ಮೇಲಿನ ಜೀವ ವೈವಿಧ್ಯತೆಯನ್ನು ಕಾಪಾಡಬೇಕು ಎಂಬ ನಿಟ್ಟಿನಲ್ಲಿ ಕೆಲಸ ಮಾಡುತ್ತಿರುವ ದೊಡ್ಡ ಹೊಸೂರಿನ ಗಾಂಧೀ ಸಹಜ ಬೇಸಾಯ ಆಶ್ರಯಮದಲ್ಲಿ ಮಾರ್ಚ್ 01 ರಂದು ಬೆಳಗ್ಗೆ ಗಾಂಧಿ ರೈತ ವಿಜ್ಞಾನ ಕೇಂದ್ರ–ಜೈವಿಕ ಸಂಪನ್ಮೂಲಕ ಕೇಂದ್ರವನ್ನು ಆರಂಭಿಸಲಾಗುತ್ತಿದೆ.

ಸಾವಯವ ಕೃಷಿಗೆ ಬೇಕಾದ ಒಳಸುರಿಗಳಾದ ಪಂಚಗವ್ಯ, ಕುನಪಜಲ ಮತ್ತು ಇನ್ನಿತರ ಪದಾರ್ಥಗಳನ್ನು ಹೊಂದಿಸಲು ಹಾಗು ಉತ್ಪಾದಿಸಲು ರೈತರಿಗೆ ಕಷ್ಟವಾಗುತ್ತಿದೆ. ಉದಾಹರಣೆಗೆ ಹೇಳುವುದಾದರೆ, ನೀಲಗಿರಿ ಎಲೆಯ ಸಾರವು ಬಿಳಿ ನೊಣಗಳು ಮತ್ತು ಕಪ್ಪುಹೇನುಗಳಂತಹ ಕ್ರಿಮಿಗಳನ್ನು ಹತೋಟಿಗೊಳಿಸುತ್ತದೆ, ಅಂದರೆ ಮೊಟ್ಟೆ ಇಡುವ ಕ್ರಿಯೆ ತಡೆಯುತ್ತದೆ ಎಂದು ವೈಜ್ಞಾನಿಕ ಸಂಶೋಧನೆಗಳಿಂದ ತಿಳಿದುಬಂದಿದೆ.

"ಗಾಂಧಿ ರೈತ ವಿಜ್ಞಾನ ಕೇಂದ್ರ ಹಾಗೂ ಗಾಂಧಿ ಜೈವಿಕ ಸಂಪನ್ಮೂಲ ಕೇಂದ್ರ"ದ ಉದ್ಘಾಟನಾ ಸಮಾರಂಭದಲ್ಲಿ ಶ್ರೀಸಿದ್ದಗಂಗಾ ಮಠದ ಶ್ರೀಶ್ರೀಸಿದ್ದಲಿಂಗ ಮಹಾಸ್ವಾಮೀಜಿಗಳು, ತಿಪಟೂರಿನ ಗುರುಕುಲಾನಂದ ಆಶ್ರಮದ ಸದ್ಗುರು ಶ್ರೀ ಇಮ್ಮಡಿ ಕರಿಬಸವದೇಶಿ ಕೇಂದ್ರ ಮಹಾಸ್ವಾಮಿಜಿಗಳು, ಕೆವಿಕೆ ಹಿರೇಹಳ್ಳಿಯ ಡಾ.ಎನ್.ಲೋಗಾನಂದನ್,ಜಿಡಿಯು ರಾಜ್ಯಾಧ್ಯಕ್ಷರಾದ ಮಹಿಮ ಜೆ.ಪಟೇಲ್,ರಾಷ್ಟ್ರೀಯ ಸ್ವಾಭಿಮಾನಿ ಅಂದೋಲನದ ಬಸವರಾಜ ಪಟೇಲ್ ವೀರಾಪುರ, ರೈತಮುಖಂಡರಾದ ಹೊನ್ನೂರು ಪ್ರಕಾಶ್, ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಹಾಗು ತುಮಕೂರು ಜಿಲ್ಲಾಧ್ಯಕ್ಷ ಎ.ಗೋವಿಂದರಾಜು, ಕೃಷಿ ಆರ್ಥಿಕ ತಜ್ಞರಾದ ತೇಜಸ್ವಿನಿ ಪಟೇಲ್, ಕರ್ನಾಟಕ ಸರಕಾರದ ಕೃಷಿ ಇಲಾಖೆ ಆಯುಕ್ತರು ಈ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ಜೈನ್ ಆಸ್ಪತ್ರೆಯಿಂದ ಉಚಿತವಾಗಿ ಕಾಲು ಜೋಡಣೆ

ಹುಳಿಯಾರು: ಸಕ್ಕರೆ ಕಾಯಿಲೆ ಅಥವಾ ಅಪಘಾತದಲ್ಲಿ ಕಾಲ ಕಟ್ಟಾಗಿದ್ದರೆ ಅಥವಾ ಮುಂಗಾಲು ಮುರಿದಿದ್ದರೆ ಜೈನ್ ಆಸ್ಪತ್ರೆಯಿಂದ ಉಚಿತವಾಗಿ ಕಾಲು, ಮುಂಗಾಲು ಜೋಡಣೆ ಮಾಡಿಕೊಡಲಾಗುವುದು ಎಂದು ಬೆಂಗಳೂರಿನ ಮಹಾವೀರ ಜೈನ ಆಸ್ಪತ್ರೆಯ ಪಿಆರ್ಒ ಮಂಜುನಾಥ್ ತಿಳಿಸಿದರು.

ಹುಳಿಯಾರಿನ ಚಿಕ್ಕಬಿದರೆಯ ಶ್ರೀ ಮಾರುತಿ ಗ್ರಾಮಾಂತರ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಚಿಕ್ಕನಾಯಕನಹಳ್ಳಿ ಆರ್ಥಿಕ ಸಾಕ್ಷರತಾ ಕೇಂದ್ರದಿಂದ ಜನ ಸುರಕ್ಷಾ ಅಭಿಯಾನದ ಅಂಗವಾಗಿ ಬೆಂಗಳೂರಿನ ಭಗವಾನ್ ಮಹಾವೀರ ಜೈನ ಆಸ್ಪತ್ರೆ ಸಹಕಾರದೊಂದಿಗೆ ಏರ್ಪಡಿಸಿದ್ದ ಆರೋಗ್ಯ ಅರಿವು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸೀಳು ತುಟಿ ಇರುವವರಿಗೆ ಊರಿಂದ ಆಸ್ಪತ್ರೆಗೆ ಬಂದೋಗುವ ಖರ್ಚು ಕೊಟ್ಟು ಊಟತಿಂಡಿಯ ವ್ಯವಸ್ಥೆ ಮಾಡಿ ಉಚಿತವಾಗಿ ಶಸ್ತ್ರ ಚಿಕಿತ್ಸೆ ಮಾಡಲಾಗುವುದು, ಎಸ್ಎಸ್ಎಲ್ಸಿ ಒಳಗಿನ ವಿದ್ಯಾರ್ಥಿಗಳಿಗೆ ಬೆನ್ನು ಮೂಳೆಯ ತೊಂದರೆ ಇದ್ದರೆ ಗರಿಷ್ಟ 8 ಲಕ್ಷ ರೂ. ವರೆವಿಗೆ ಉಚಿತವಾಗಿ ಚಿಕಿತ್ಸೆ ನೀಡಲಾಗುವುದು. ಈ ಮೂರು ಶಸ್ತ್ರಚಿತ್ಸೆಯ ಸೇವೆ ಪಡೆಯಲು ಬಿಪಿಎಲ್ ಕಾರ್ಡ್ ಅಗತ್ಯ ಇಲ್ಲ ಬಡವರಾಗಲಿ, ಶ್ರೀಮಂತರಾಗಲಿ ಎಲ್ಲರಿಗೂ ಉಚಿತವಾಗಿ ಸೇವೆ ನೀಡಲಾಗುವುದು ಎಂದು ತಿಳಿಸಿದರು.

ಸಕ್ಕರೆ ಕಾಯಿಲೆಗಿಂದ ಅಪಾಯಕಾರಿ ತಂಬಾಕು ಸೇವನೆ. ಐದಾರು ವರ್ಷ ತಂಬಾಕು ಸೇವನೆ ಮಾಡಿದರೂ ಸಾಕು ಕಣ್ಣಿನ ತೊಂದರೆ, ಕಾಲು, ಕಿಡ್ನಿ, ಹಾರ್ಟ್ ತೊಂದರೆ ಆರಂಭವಾಗುತ್ತದೆ.

ಪಾವಗಡ; ಮಹಾಕುಂಭಮೇಳದ ಗಂಗಾಜಲ ಸಂಪ್ರೋಕ್ಷಣೆ

ಹಬ್ಬದ ಪ್ರಯುಕ್ತ ಸೇವಾಟ್ರಸ್ಟ್, ಶಮಿ ವೃಕ್ಷ ಟ್ರಸ್ಟ್ ವತಿಯಿಂದ, ಬುಧವಾರ ಪಟ್ಟಣದ ಎಸ್ ಎಸ್ ಕೆ ಬಯಲುರಂಗ ಮಂದಿರದಲ್ಲಿ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಕಾರ್ಯಕ್ರಮಗಳ ಅಂಗವಾಗಿ, ಮಹಾಕುಂಭಮೇಳದ ತ್ರಿವೇಣಿ ಸಂಗಮದ ಗಂಗಾಜಲವನ್ನು, ಪಟ್ಟಣದ ಶನಿಮಾತ್ಮ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ, ಅಲ್ಲಿಂದ ಮಂಗಳ ವಾದ್ಯಗಳೊಂದಿಗೆ, ಬಯಲು ರಂಗಮಂದಿರದವೆರಗೂ ಮೆರವಣಿಗೆ ನಡೆಸಿ, ಗಂಗಾಜಲವನ್ನು ಶಿವ ಭಕ್ತರಿಗೆ, ಪ್ರೋಕ್ಷಣೆ ಮಾಡಲಾಯಿತು, ಇನ್ನು ಕಾರ್ಯಕ್ರಮವನ್ನು ಉದ್ಘಾಟಿಸಿ ಡಿ.ಸಿ.ಸಿ. ಬ್ಯಾಂಕ್ ನಿರ್ದೇಶಕರಾದ ಟಿ.ಎನ್. ನರಸಿಂಹಯ್ಯ ಮಾತನಾಡಿ, ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಈ ಎರಡು ಟ್ರಸ್ಟ್ ವತಿಯಿಂದ ಶಾಲಾ ವಿದ್ಯಾರ್ಥಿಗಳ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟು, ಮನರಂಜನೆ ಜೊತೆಗೆ, ಜಾಗರಣೆಯನ್ನು ಮಾಡಿದಂತಾಗುತ್ತದೆ, ಆಗಮಿಸಿರುವ ಎಲ್ಲರಿಗೂ ಶಿವನ ಆಶೀರ್ವಾದ ದೊರಕಲಿ ಎಂದು ಶುಭ ಹಾರೈಸಿದ್ದಾರೆ. ಸಮಾಜಸೇವಕ ಸೂರಪನೇನಿ ವಿದ್ಯಾಸಾಗರ್ ಮಾತನಾಡಿ, ಹರ ಹರ ಮಹಾದೇವ ಎನ್ನುವ ಹೆಸರಲ್ಲಿ ಅದ್ಭುತ ಶಕ್ತಿ ಅಡಗಿದೆ, ಶಿವನ ಮಂತ್ರವನ್ನು ಪಟಿಸುತ್ತಾ ಜಾಗರಣೆ ಮಾಡಿದರೆ ಎಲ್ಲರೂ ಶಿವನ ಕೃಪೆಗೆ ಪಾತ್ರರಾಗುತ್ತಾರೆ ಎಂದು ತಿಳಿಸಿದರು.

ಈ ವೇಳೆ ಮಾಜಿ ಪುರಸಭಾ ಅಧ್ಯಕ್ಷರಾದ ಮಾನಂ ವೆಂಕಟಸ್ವಾಮಿ, ರಾಜ್ಯ ರೈತ ಸಂಘದ ಅಧ್ಯಕ್ಷರಾದ ವಿ. ನಾಗಭೂಷಣ ರೆಡ್ಡಿ, ಅಲ್ಪಸಂಖ್ಯಾತ ಮುಖಂಡ ಶಾಬಾಬು,ಈ ವೇಳೆ ಶಮಿ ವೃಕ್ಷ ಟ್ರಸ್ಟ್ ನ ಕಾರ್ಯದರ್ಶಿ ಸತ್ಯ ಲೋಕೇಶ್, ಸಹಾಯ ಸೊಸೈಟಿ ಅಧ್ಯಕ್ಷ ಮಾನಂ ಶಶಿಕಿರಣ್, ಸಂಧ್ಯಾ ಶಶಿಕಿರಣ್, ಬೇಕರಿ ನಾಗರಾಜ್, ಎಸ್ ಎಸ್ ಕೆ ಸಂಘದ ಸಿ.ಇ.ಓ. ಮಂಗಳವಾಡ ಮಂಜುನಾಥ್, ಬಜಾಜ್ ಶ್ರೀನಾಥ್, ವೀರಮ್ನಳ್ಳಿ ಲೋಕೇಶ್, ಡಿಕೋರೇಟ್ ಭರತ್, ಮತ್ತಿತರರು ಇದ್ದರು.

ಭೀಕರ ರಸ್ತೆ ಅಪಘಾತ; ಓರ್ವ ಸ್ಥಳದಲ್ಲಿಯೇ ಸಾವು, ಮತ್ತಿಬ್ಬರ ಸ್ಥಿತಿ ಗಂಭೀರ

ಪಾವಗಡ:: ಬುಧವಾರ ರಾತ್ರಿ ಆಂಧ್ರದ ರೆಡ್ಡಿ ಪಲ್ಲಿಯಿಂದ ಲೇಪಾಕ್ಷಿಯಲ್ಲಿ ನಡೆಯುತ್ತಿರುವಂತಹ ಮಹಾ ಶಿವರಾತ್ರಿಯ ಜಾಗರಣೆ ಕಾರ್ಯಕ್ರಮಕ್ಕೆ ದ್ವಿಚಕ್ರ ವಾಹನದಲ್ಲಿ ಮೂರು ಜನ ಸ್ನೇಹಿತರು ತೆರಳುತ್ತಿದ್ದಾಗ ಕಸಬಾ ಹೋಬಳಿಯ ದೊಮ್ಮತಮರಿ ಗ್ರಾಮದ ಸೆಲ್ ಪೆಟ್ರೋಲ್ ಬಂಕ್ ಸಮೀಪ ದ್ವಿಚಕ್ರವಾಹನ ಮತ್ತು ಲಗೇಜ್ ಆಟೋ ನಡುವೆ ಡಿಕ್ಕಿ ಸಂಭವಿಸಿದ್ದು, ಅಪಘಾತದ ತೀವ್ರತೆಗೆ ರೆಡ್ಡಿಪಲ್ಲಿ ಗ್ರಾಮದ 18 ವರ್ಷದ ಚರಣ್ ಎನ್ನುವ ಯುವಕ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿತ್ತಿದೆ.

ಇದೇ ಬೈಕ್‌ನಲ್ಲಿ ಸಂಚರಿಸುತ್ತಿದ್ದ ಮತ್ತಿಬ್ಬರ ಸ್ಥಿತಿ ಗಂಭೀರವಾಗಿದ್ದು ಇವರಿಗೆ ಹೆಚ್ಚಿನ ಚಿಕಿತ್ಸೆಯನ್ನು ಹಿಂದೂಪುರ ಮತ್ತು ತುಮಕೂರಿನಲ್ಲಿ ಕೊಡಿಸಲಾಗುತ್ತಿದೆ ಎನ್ನುವ ಮಾಹಿತಿ ಸಹ ಲಭ್ಯವಾಗಿದೆ, ದ್ವಿಚಕ್ರವಾಹನಕ್ಕೆ ಅಪಘಾತ ಮಾಡಿದ ಆಟೋ ಚಾಲಕ ಲಗೇಜ್ ಆಟೋ ಸಹಿತ ಪರಾರಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದು ಘಟನೆ ಪಾವಗಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಜರುಗಿದ್ದು ಪಾವಗಡ ಸಾರ್ವಜನಿಕ ಆಸ್ಪತ್ರೆಯ ಶವಗಾರದ ಬಳಿ ಚರಣ್ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟುವಂತಿತ್ತು..

ಯುವತಿಗಾಗಿ ಕುಣಿಗಲ್ ದೊಡ್ಡಕೆರೆಯಲ್ಲಿ ಹುಡುಕಾಟ

ಕುಣಿಗಲ್: ದೊಡ್ಡಕೆರೆ ಗೆ ಯುವತಿಯೊಬ್ಬಳು ಬಿದ್ದಿದ್ದಾಳೆಂಬ ಸಂಶಯದ ಮೇಲೆ ಪೊಲೀಸ್ ಹಾಗು ಅಗ್ನಿಶಾಮಕ ದಳದ ವತಿಯಿಂದ ಪರಿಶೀಲನೆ ನಡೆಸಲಾಯಿತು.

ಇಲ್ಲಿನ ದೊಡ್ಡ ಕೆರೆಯ ಹಳೆ ತೂಬಿನ ಬಳಿ ಕುಣಿಗಲ್ ಕೊತ್ತೆಗೆರೆ ಹೋಬಳಿಯ ಸೊಬಗನಹಳ್ಳಿ ಸುಮಾ (22) ಬೆಂಗಳೂರಿನಲ್ಲಿ ಸಾಫ್ಟ್ವೇರ್ ಇಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದ ಯುವತಿಯು ಗುರುವಾರ ಮಧ್ಯಾಹ್ನ ಕುಣಿಗಲ್ ದೊಡ್ಡಕೆರೆಯ ಬಳಿ ಬಂದು ಆಕೆಯ ಫೋನ್ ಆಧಾರ್ ಕಾರ್ಡ್ ಇನ್ನಿತರ ವಸ್ತುಗಳನ್ನು ಕೆರೆಯ ದಡದಲ್ಲಿಟ್ಟಿದ್ದು ಪತ್ತೆಯಾಗಿದ್ದ ಹಿನ್ನೆಲೆಯಲ್ಲಿ ಆಕೆಯು ಕೆರೆಗೆ ಬಿದ್ದಿರ ಬಹುದೆಂಬ ಸಂಶಯದ ಹಿನ್ನೆಲೆಯಲ್ಲಿ ಪೊಲೀಸರಿಗೆ ಮಾಹಿತಿ ತಿಳಿಸಿದ್ದು ಸ್ಥಳಕ್ಕೆ ವೃತ್ತ ನಿರೀಕ್ಷಕ ನವೀನ್ ಗೌಡ, ವಿಷಯ ತಿಳಿದ ಶಾಸಕ ಡಾಕ್ಟರ್ ರಂಗನಾಥ್ ರವರು ಕೂಡ ಆಗಮಿಸಿ ಅಗ್ನಿಶಾಮಕ ದಳದ ಸಿಬ್ಬಂದಿಯಿಂದ ಬೋಟ್ ತರಿಸಿ ಪತ್ತೆಗೆ ಹುಡುಕಾಟ ನಡೆಸಲಾಯಿ ತಾದರೂ ರಾತ್ರಿ ಕತ್ತಲಾದರೂ ಇನ್ನೂ ಶೋಧನಾ ಕಾರ್ಯ ನಡೆಯುತ್ತಿತ್ತು.

ಮಾ.2, 9ರಂದು ವಿದ್ಯುತ್ ವ್ಯತ್ಯಯ

ತುಮಕೂರು: ಬೆವಿಕಂ ವಾಣಿಜ್ಯ, ಕಾರ್ಯ ಮತ್ತು ಪಾಲನಾ ವಿಭಾಗ ವ್ಯಾಪ್ತಿಯಲ್ಲಿ ಗೋಪುರ ನಿರ್ಮಾಣ ಕಾರ್ಯ ಕೈಗೊಂಡಿರುವ ಹಿನ್ನೆಲೆಯಲ್ಲಿ ಮಾರ್ಚ್ 2 ಹಾಗೂ 9ರಂದು ಮೇಳೇಕೋಟೆ, ಬೆಳ್ಳಾವಿ, ಹೆಗ್ಗೆರೆ, ಮಲ್ಲಸಂದ್ರ, ಬಡ್ಡಿಹಳ್ಳಿ, ದೊಡ್ಡ ಸಾರಂಗಿ ಉಪಸ್ಥಾವರಗಳಿಗೆ ಒಳಪಡುವ ಗ್ರಾಮ/ನಗರ/ಕೈಗಾರಿಕಾ ಪ್ರದೇಶಗಳಲ್ಲಿ ಬೆಳಿಗ್ಗೆ 6 ರಿಂದ 8 ಗಂಟೆ ಹಾಗೂ ಸಂಜೆ 4 ರಿಂದ 6 ಗಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಶಾಂತ್ ಕೂಡ್ಲಿಗಿ ಮನವಿ ಮಾಡಿದ್ದಾರೆ.

ಅದ್ದೂರಿಯಾಗಿ ನಡೆದ ಶ್ರೀ ಗಂಗಾಧರೇಶ್ವರ ಬ್ರಹ್ಮರಥೋತ್ಸವ

ಕೊರಟಗೆರೆ ;– ಮಹಾಶಿವರಾತ್ರಿ ಹಬ್ಬದ ಅಂಗವಾಗಿ ಫೆ26 ರಂದು ಪಟ್ಟಣದ ಪ್ರಸಿದ್ಧ ಗಂಗಾಧರೇಶ್ವರ ಸ್ವಾಮಿ ಬೆಟ್ಟದಲ್ಲಿ ಗಂಗಾಧರೇಶ್ವರಸ್ವಾಮಿಗೆ ರಾತ್ರಿ ಗಿರಿಜಾ ಕಲ್ಯಾಣ ಮತ್ತು ಲಕ್ಷದೀಪೋತ್ಸವದೊಂದಿಗೆ ಫೆ.27 ರಂದು ವಿಶೇಷ ಪೂಜೆಯೊಂಗಿದೆ ಬ್ರಹ್ಮರಥೋತ್ಸವವು ಅದ್ದೂರಿಯಾಗಿ ನಡೆಯಿತು.

ತಹಶೀಲ್ದಾರ್ ಮಂಜುನಾಥ್ ಪಟ್ಟಣದ ತೇರಿನ ಬೀದಿಯಲ್ಲಿ ನಡೆದ ಪಾರ್ವತಿ ಸಮೇತ ಗಂಗಾಧರೇಶ್ವರ ಸ್ವಾಮಿ ಬ್ರಹ್ಮರಥೋತ್ಸವಕ್ಕೆ ವಿಶೇಷ ಪೂಜೆ ಸಲ್ಲಿಸಿ ಚಾಲನೆ ನೀಡಿದರು.

ಭಕ್ತರು ಮಹಾಶಿವರಾತ್ರಿಯಂದು ಉಪವಾಸ ವ್ರತ ಆಚರಣೆಯಲ್ಲಿ ರಾತ್ರಿ ಗಂಗಾಧರೇಶ್ವರಸ್ವಾಮಿಗೆ ನಡೆದ ಗಿರಿಜಾ ಕಲ್ಯಾಣೋತ್ಸವ ಹಾಗೂ ಲಕ್ಷದೀಪೋತ್ಸವ ಕಾರ್ಯಕ್ರಮದಲ್ಲಿ ಶ್ರದ್ಧಾಭಕ್ತಿಯಿಂದ ಭಾಗವಹಿಸಿ ವಿಶೇಷ ಪೂಜೆ ಸಲ್ಲಿಸಿ ರಾತ್ರಿ ಜಾಗರಣೆ ಮಾಡಿ ಫೆ.27 ರಂದು ನಡೆದ ಗಂಗಾಧರೇಶ್ವರ ಸ್ವಾಮಿ ಬ್ರಹ್ಮರತಥೋತ್ಸವದಲ್ಲಿ ಭಾಗವಹಿಸಿ ತಮ್ಮ ಇಷ್ಟಾರ್ಥಗಳನ್ನು ಈಡೇರಿಸುವಂತೆ ಪ್ರಾರ್ಥನೆ ಮಾಡಿ ರಥೋತ್ಸವದ ನಂತರ ಪ್ರಸಾದ ಸ್ವೀಕರಿಸಿದ ತಮ್ಮ ಉಪವಾಸ ವ್ರತ ಕೊನೆಗೊಳಿಸುವರು. ಈ ಸಂದರ್ಭದಲ್ಲಿ ಪೊಲೀಸ್ ಇನ್ಸ್ಪೆಕ್ಟರ್ ಅನಿಲ್, ಕಂದಾಯ ಇಲಾಖೆಯ ಆರ್.ಐ ಬಸವರಾಜು, ವಿ.ಎ.ಪವನ್ಕುಮಾರ್, ಪ.ಪಂ.ಮುಖ್ಯಾಧಿಕಾರಿ ಉಮೇಶ್, ಪ.ಪಂ.ಅಧ್ಯಕ್ಷ ಅನಿತಾ, ಸ್ಥಾಯಿಸಮಿತಿ ಅಧ್ಯಕ್ಷ ಹೇಮಾ, ಸದಸ್ಯರಾದ ಕೆ.ಎನ್.ಲಕ್ಷಿ ?ಮನಾರಾಯಣ್, ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ವಿ.ಪುರಷೋತ್ತಮ್, ಪಿ.ಎಲ್.ಡಿ ಬ್ಯಾಂಕ್ ನಿರ್ದೇಶಕ ಕೆ.ಎಲ್.ಆನಂದ್, ಜಿ.ಪಂ.ಮಾಜಿ ಸದಸ್ಯ ಸುಕುಮಾರ್, ಪ.ಪಂ.ಮಾಜಿ ಸದಸ್ಯ ಪವನ್ಕುಮಾರ್, ರಣಬೈರೇಗೌಡ ಯುವ ವೇದಿಕೆಯ ಅಧ್ಯಕ್ಷ ಕೆ.ವಿ.ಮಂಜುನಾಥ್, ಕೆ.ಬಿ.ಲೋಕೇಶ್, ಫ್ರೇಂಡ್ಸ್ ಗ್ರೂಪ್ ಅಧ್ಯಕ್ಷ ರವಿ ಕುಮಾರ್, ಮಲ್ಲಣ್ಣ ಸೇರಿದಂತೆ ಇನ್ನಿತರರು ಭಾಗವಹಿಸಿದ್ದರು.

ಭೋವಿ ಸಮಾಜದಿಂದ ಶಾಸಕ ವೆಂಕಟೇಶ್‌ಗೆ ಅಭಿನಂದನೆ

ತುಮಕೂರು : ಇಂದು ತುಮಕೂರು ನಗರದಲ್ಲಿ ಪಾವಗಡ ವಿಧಾನಸಭಾ ಕ್ಷೇತ್ರದ ಶಾಸಕರಾದ ಹೆಚ್.ವಿ. ವೆಂಕಟೇಶ್‌ರವರ ಮನೆಗೆ ತುಮಕೂರು ಜಿಲ್ಲೆಯ ಭೋವಿ ಸಮಾಜದ ಕೆಲ ಮುಖಂಡರು ತೆರಳಿ ಅಭಿನಂದಿಸಿದರು.

ಅಭಿನಂದನೆಗಳನ್ನು ಸಲ್ಲಿಸಿ ಉದ್ಯಮಿ, ಭೋವಿ ಸಮಾಜದ ಮುಖಂಡರು, ಸಮಾಜ ಸೇವಕರಾದ ಗೋಲ್ಡ್ ದೀಪು ಮಾತನಾಡಿ ನಮ್ಮ ಭೋವಿ ಸಮುದಾಯವು ಅತ್ಯಂತ ಹಿಂದುಳಿದ ಸಮುದಾಯವಾಗಿದ್ದು ಇಂತಹ ಸಮುದಾಯದಲ್ಲಿ ಹುಟ್ಟಿದಂತಹ ಕೆಲವಷ್